ದಿಃ 02-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಂದುವರೆದ ಪಾಟೀ ಸವಾಲು **: 2** ಮತ್ತು **6** ನೇ ಪ್ರತಿವಾದಿಯ ಪರ ಶ್ರೀ**.** ಜಿ**.**ಎಸ್**.**ಆರ್ ವಕೀಲರಿಂದಃ

ವಿ.ಪಿ ಖಾತೆ ಸಂಖ್ಯೆ 287 ಮತ್ತು ಅಸೆಸ್ಮೆಂಟ್ ನಂಬರ್ 437 ರ ನಿವೇಶನವನ್ನು ನನ್ನ ಕುಟುಂಬದ ಗೋವಿಂದಪ್ಪ ರವರು 6 ನೇ ಪ್ರತಿವಾದಿಯ ಹೆಂಡತಿ ಚಿನ್ನಮ್ಮ ರವರಿಗೆ ದಿನಾಂಕ 05-11-1998 ರಂದು ಮಾರಾಟ ಮಾಡಿದ್ದಾರೆ ಎಂದರೆ ಸಾಕ್ಷಿಯು ತಾನು ಮಾರಾಟ ಮಾಡಿಲ್ಲ ಎಂದು ನುಡಿಯುತ್ತಾರೆ. ಸದರಿ ದಿನ ಸದರಿ ಆಸ್ತಿಯ ಸ್ವಾಧೀನವನ್ನು ಬಿಟ್ಟುಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಸದರಿ ನಿವೇಶನದಲ್ಲಿ 6 ನೇ ಪ್ರತಿವಾದಿಯು ಮನೆ ನಿರ್ಮಿಸಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ಮನೆ ನಿರ್ಮಿಸುವ ಕಾಲಕ್ಕೆ ಪಂಚಾಯಿತಿಯಿಂದ ಅನುಮತಿ ಪಡೆದುಕೊಂಡಿದ್ದರು ಎಂದರೆ ಸರಿಯಲ್ಲ. ಮನೆ ನಿರ್ಮಿಸುವ ಕಾಲಕ್ಕೆ ನಾವು ಯಾವುದೇ ತಕರಾರು ಮಾಡಿಲ್ಲ ಎಂದರೆ ಸಾಕ್ಷಿಯು ಸದರಿ ಸಮಯದಲ್ಲಿ ತನಗೆ ಗೊತ್ತಿರಲಿಲ್ಲ ಎಂದು ನುಡಿಯುತ್ತಾರೆ. ದಾವೆ ಹೂಡುವ ಕಾಲಕ್ಕೆ ದಾವಾ ಆಸ್ತಿ ನಮ್ಮ ಸ್ವಾಧೀನದಲ್ಲಿ ಇರಲಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗೂ ಮತ್ತು ನಮಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಹಣ ಪಡೆಯುವ ಉದ್ದೇಶದಿಂದ ಈ ದಾವೆ ಹೂಡಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ದಾವೆ ಹೂಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಮಗೆ ದಾವಾ ಆಸ್ತಿಯ ಮೇಲೆ ಯಾವುದೇ ಹಕ್ಕು, ಅಧಿಕಾರ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-

ಪ್ರ.ಸಿ.ನ್ಯಾ ಮತ್ತು ಜೆಎಂಎಫ್‌ಸಿ,

ಗೌರಿಬಿದನೂರು